RNI No. KARBIL/2001/47147

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ-IVA | ಬೆಂಗಳೂರು, ಶುಕ್ರವಾರ, ಮಾರ್ಚ್ ೩೧, ೨೦೧೭ (ಚೈತ್ರ ೧೦, ಶಕ ವರ್ಷ ೧೯೩೯) | ನಂ. ೩೨೮ |
|---|---|---|
| Part-IVA | Bengaluru, Friday, March 31, 2017 (Chaitra 10, Shaka Varsha 1939) | No. 328 |


**ಸಂಸದೀಯ ವ್ಯವಹಾರಗಳ ಸಚಿವಾಲಯ**

**ಅಧಿಸೂಚನೆ**

**ಸಂಖ್ಯೆ: ಸಂವ್ಯಶಾಇ 18 ಶಾಸನ 2017, ಬೆಂಗಳೂರು, ದಿನಾಂಕ: 31.03.2017**

ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ವಿಧೇಯಕ, 2017ಕ್ಕೆ 2017ರ ಮಾರ್ಚ್ ತಿಂಗಳ 31ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 15 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2017ರ ಕರ್ನಾಟಕ ಅಧಿನಿಯಮ ಸಂಖ್ಯೆ: 15**

(2017ರ ಮಾರ್ಚ್ 31ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

**ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2017**

(2017ರ ಮಾರ್ಚ್ 31ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ನ್ನು (2004ರ ಕರ್ನಾಟಕ ಅಧಿನಿಯಮ 32) ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಅರವತ್ತೆಂಟನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ಮೌಲ್ಯವರ್ಧಿತ ತೆರಿಗೆ (ತಿದ್ದುಪಡಿ) ಅಧಿನಿಯಮ, 2017 ಎಂದು ಕರೆಯತಕ್ಕದ್ದು.

(2) ಇದು 2017ರ ಏಪ್ರಿಲ್ ಒಂದನೇ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. 40ನೇ ಪ್ರಕರಣದ ತಿದ್ದುಪಡಿ.-** ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮ, 2003ರ (2004ರ ಕರ್ನಾಟಕ ಅಧಿನಿಯಮ 32) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ) 40ನೇ ಪ್ರಕರಣದಲ್ಲಿ,-

(i) (1)ನೇ ಉಪಪ್ರಕರಣದಲ್ಲಿ, ಎರಡನೇ ಪರಂತುಕದ ತರುವಾಯ ಈ ಮುಂದಿನ ಪರಂತುಕವನ್ನು ಸೇರಿಸತಕ್ಕದ್ದು, ಎಂದರೆ:-

"ಅಲ್ಲದೇ ಪರಂತು, 2012ರ ಏಪ್ರಿಲ್ 1ನೇ ದಿನಾಂಕದಿಂದ ಆರಂಭವಾಗಿ 2014ರ ಮಾರ್ಚ್ 31ನೇ ದಿನಾಂಕಕ್ಕೆ ಕೊನೆಗೊಳ್ಳುವ ಅವಧಿಯವರೆಗಿನ ಯಾವುದೇ ತೆರಿಗೆ ಅವಧಿಗೆ ಸಂಬಂಧಿಸಿದ ತೆರಿಗೆ ನಿರ್ಧರಣೆಯನ್ನು ಅಥವಾ ಮರುತೆರಿಗೆ ನಿರ್ಧರಣೆಯನ್ನು ನಿಯಮಿಸಲಾದ ತೆರಿಗೆ ಅವಧಿಯು ಮುಕ್ತಾಯವಾದ ತರುವಾಯ ಆರು ವರ್ಷಗಳ ಅವಧಿಯೊಳಗೆ ಮಾಡತಕ್ಕದ್ದು."

(ii) (3)ನೇ ಉಪಪ್ರಕರಣದಲ್ಲಿ,, "ಸಕ್ಷಮ ನ್ಯಾಯಾಲಯವು" ಎಂಬ ಪದಗಳ ತರುವಾಯ "ಅಥವಾ ಯಾವುದೇ ಪುನರೀಕ್ಷಣಾ ನಡವಳಿಯಲ್ಲಿ ಜಂಟಿ ಆಯುಕ್ತ ಅಥವಾ ಹೆಚ್ಚುವರಿ ಆಯುಕ್ತ ಅಥವಾ ಆಯುಕ್ತರು" ಎಂಬ ಪದಗಳನ್ನು 2005ರ ಏಪ್ರಿಲ್ ಮೊದಲನೇ ದಿನದಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆಯೆಂದು ಭಾವಿಸತಕ್ಕದ್ದು .

**3. ಒಂದನೇ ಅನುಸೂಚಿಯ ತಿದ್ದುಪಡಿ.-** ಮೂಲ ಅಧಿನಿಯಮದ ಒಂದನೇ ಅನುಸೂಚಿಯಲ್ಲಿ 33ನೇ ಕ್ರಮಸಂಖ್ಯೆಯ ಮತ್ತು ಅದಕ್ಕೆ ಸಂಬಂಧಿಸಿದ ನಮೂದುಗಳ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"34. ಬೀರ್, ಫೆನ್ನಿ, ಲಿಕ್ವೇರ್ ಹಾಗೂ ವೈನನ್ನು ಒಳಗೊಂಡಂತೆ ಮದ್ಯ"

**4. ಮೂರನೇ ಅನುಸೂಚಿಯ ತಿದ್ದುಪಡಿ.-** ಮೂಲ ಅಧಿನಿಯಮದ ಮೂರನೇ ಅನುಸೂಚಿಯಲ್ಲಿ 59-ಎ ಕ್ರಮಸಂಖ್ಯೆಗೆ ಸಂಬಂಧಿಸಿದ ನಮೂದುಗಳನ್ನು ಬಿಟ್ಟುಬಿಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ. ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ.

ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ ಘಟಕ, ಬೆಂಗಳೂರು. (ಪಿ7) ಪ್ರತಿಗಳು: 400